## ಜೆಎಸ್‌ಎಸ್ ಮಹಾವಿದ್ಯಾಪೀಠ
## ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–318

**26 ಅಕ್ಟೋಬರ್ 2024 * ಶನಿವಾರ * ಸಂಜೆ 6.00**

ಶ್ರೀ ಶಿವರಾತ್ರಿ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಮೈಸೂರು

---

**ದಿವ್ಯ ಆಶೀರ್ವಾದ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

**ಅಧ್ಯಕ್ಷತೆ**

**ಶ್ರೀ ಕೆ.ಆರ್. ಸಂತಾನಂ**

ನಿರ್ದೇಶಕರು, ಲೆಕ್ಕ ಮತ್ತು ಲೆಕ್ಕ ಪರಿಶೋಧನ ವಿಭಾಗ
ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರು

**ಉಪನ್ಯಾಸ**

**ಶ್ರೀ ಬಿ. ರವೀಶ್ ಕುಮಾರ್**

ನಿವೃತ್ತ ಶಿಕ್ಷಕರು, ಮೈಸೂರು

**ವಿಷಯ : ವಚನಗಳಲ್ಲಿ ಪರಿಸರಪ್ರಜ್ಞೆ**

**ವಚನ ಗಾಯನ**

**ಕು. ಎನ್. ಚೂಡಾಮಣಿ**

ಮೈಸೂರು

**ತಮಗೆ ಆದರದ ಸ್ವಾಗತ**

**ಪ್ರಾಯೋಜಕರು**

**ಶ್ರೀ ಕೆ.ಆರ್. ನಟರಾಜು**

ನಿವೃತ್ತ ಶಿಕ್ಷಕರು, ಕಿರುಗಾವಲು, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಈ ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಬಿ. ರವೀಶ್ ಕುಮಾರ್‌ರವರು** ಚಾಮರಾಜನಗರ ಜಿಲ್ಲೆ ಉಡಿಗಾಲದವರು. ಪ್ರಾಥಮಿಕ ಶಾಲಾ ಶಿಕ್ಷಕರ ತರಬೇತಿ ಪಡೆದು ಮೈಸೂರು ವಿಶ್ವವಿದ್ಯಾನಿಲಯದ ಅಂಚೆ ಮತ್ತು ತೆರಪಿನ ಶಿಕ್ಷಣ ಸಂಸ್ಥೆಯಲ್ಲಿ ಬಿಎ, ಬಿಎಡ್ ಹಾಗೂ ಎಂ.ಎ. ಪದವಿ ಪಡೆದರು. ಪ್ರಾಥಮಿಕ ಶಾಲಾ ಶಿಕ್ಷಕರಾಗಿ ವೃತ್ತಿ ಆರಂಭಿಸಿ ನಂತರ ಪ್ರೌಢಶಾಲೆ ಶಿಕ್ಷಕರಾಗಿ ನಾಲ್ಕು ದಶಕಗಳ ಕಾಲ ಸೇವೆ ಸಲ್ಲಿಸಿದ್ದಾರೆ. ಕನ್ನಡ ಪಠ್ಯಪುಸ್ತಕ ಪರಿಷ್ಕರಣಾ ಸಮಿತಿ ಹಾಗೂ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ ಪಬ್ಲಿಕ್ ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸಮಿತಿಯ ಸದಸ್ಯರಾಗಿ ಕಾರ್ಯ ನಿರ್ವಹಿಸಿರುತ್ತಾರೆ. ಶುಭೋದಯ ಟ್ರಸ್ಟ್ ವತಿಯಿಂದ ಅಂಧ ವಿದ್ಯಾರ್ಥಿಗಳ ಸ್ವಯಂಕಲಿಕೆಗೆ ಕನ್ನಡದ 'ಧ್ವನಿ ಪುಸ್ತಕ' ಸಿದ್ಧಪಡಿಸಿಕೊಟ್ಟಿರುತ್ತಾರೆ. 'ಲಯನ್ಸ್ ಕ್ಲಬ್ ಆಫ್ ಪ್ಯಾಲೇಸ್ ಸಿಟಿ', 'ಸೋಂಪುರ ಬಸಪ್ಪ ಆದರ್ಶ ಶಿಕ್ಷಕ ಪ್ರಶಸ್ತಿ' ಸೇರಿದಂತೆ ಇವರಿಗೆ ಅನೇಕ ಪುರಸ್ಕಾರಗಳು ಸಂದಿವೆ.

**ಶ್ರೀ ಕೆ.ಆರ್. ಸಂತಾನಂರವರು** ಜೆಎಸ್‌ಎಸ್ ಮಹಾವಿದ್ಯಾಪೀಠದ ಲೆಕ್ಕ ಮತ್ತು ಲೆಕ್ಕ ಪರಿಶೋಧನಾ ವಿಭಾಗದ ನಿರ್ದೇಶಕರು. ಕೇಂದ್ರ ಸರ್ಕಾರಿ ಉದ್ಯೋಗಿಗಳಾಗಿ ಬೆಂಗಳೂರಿನ ಮಹಾಲೇಖಪಾಲರ ಕಛೇರಿಯಲ್ಲಿ ವೃತ್ತಿ ಆರಂಭಿಸಿದರು. ಲಂಡನ್ನಿನ ಭಾರತೀಯ ಹೈ ಕಮಿಷನ್, ಪ್ಯಾರಿಸ್, ರುಮೇನಿಯಾ, ಸ್ವಿಟ್ಜರ್‌ಲ್ಯಾಂಡ್, ಡೆನ್ಮಾರ್ಕ್ ಸೇರಿದಂತೆ ಅನೇಕ ದೇಶಗಳ ರಾಯಭಾರಿ ಕಚೇರಿಗಳಲ್ಲಿ ಕಾರ್ಯ ನಿರ್ವಹಿಸಿದ್ದಾರೆ. ಕರ್ನಾಟಕ ರಾಜ್ಯ ಸರ್ಕಾರದ ಸಾರ್ವಜನಿಕ ಲೆಕ್ಕಪತ್ರ ಸಮಿತಿಯಲ್ಲಿ ಉಪಕಾರ್ಯದರ್ಶಿಗಳಾಗಿ, ಉತ್ತರ ಪ್ರದೇಶದಲ್ಲಿ ರಕ್ಷಣಾ ಸೇವೆಗಳ ಕೇಂದ್ರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ಉಪ ನಿರ್ದೇಶಕರಾಗಿ ಒಟ್ಟು ನಾಲ್ಕು ದಶಕಗಳ ಕಾಲ ಸಾರ್ಥಕ ಸೇವೆ ಸಲ್ಲಿಸಿದ್ದಾರೆ.

**ಶ್ರೀ ಕೆ.ಆರ್. ನಟರಾಜುರವರು** ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕು ಕಿರುಗಾವಲಿನವರು. ಬಿಎ ಮತ್ತು ಬಿಇಡಿ ಪದವಿ ಪಡೆದು ಶಿಕ್ಷಕರಾಗಿ ವೃತ್ತಿ ಆರಂಭಿಸಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಒಟ್ಟು ಮೂರು ದಶಕಗಳ ಕಾಲ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುತ್ತಾರೆ. ಪರಿತ್ಯಾಗ, ಮೋಹಕ ಮುತ್ತತ್ತಿ, ಪೋರ್ಚುಗೀಸರ ಅನ್ವೇಷಣೆಗಳು ಸೇರಿದಂತೆ ಹಲವಾರು ಕೃತಿಗಳನ್ನು ರಚಿಸಿದ್ದಾರೆ. ಧರ್ಮಪತ್ನಿ ಶ್ರೀಮತಿ ಪಿ.ಎಂ. ಅಮೃತಾರವರು ಗೃಹಿಣಿಯಾಗಿದ್ದಾರೆ. ಪುತ್ರಿಯರಾದ ಡಾ. ಕೆ.ಎನ್. ಚೈತ್ರ ಸ್ಕಾಟ್ಲೆಂಡಿನ ಗ್ಲಾಸ್ಗೋ ನಗರದಲ್ಲಿ ವೈದ್ಯರು. ಮತ್ತೊಬ್ಬರು ಶ್ರೀಮತಿ ಕೆ.ಎನ್. ಚಿತ್ರಾ, ಎಂಎ ಪದವೀಧರರಾಗಿದ್ದು, ಗೃಹಿಣಿಯಾಗಿದ್ದಾರೆ.